E-68095/2018

**ಕರ್ನಾಟಕ ಸರ್ಕಾರ**

345 ಸಂ:ಕಂ:ಪ್ರಾಆಕ/ಸಂಕೀರ್ಣ/16/2018-19/1774

ಪ್ರಾದೇಶಿಕ ಆಯುಕ್ತರ ಕಾರ್ಯಾಲಯ,
ಕಲಬುರಗಿ ವಿಭಾಗ, ಕಲಬುರಗಿ.
ದಿನಾಂಕ: 10.5.2018

ಕಾರ್ಯಾಲಯ 21 MAY 2018

ಇವರಿಗೆ,
ಜಿಲ್ಲಾಧಿಕಾರಿಗಳು
ಬೀದರ/ಕಲಬುರಗಿ/ಯಾದಗಿರಿ/
ರಾಯಚೂರು/ಕೊಪ್ಪಳ/ಬಳ್ಳಾರಿ.

ಮಾನ್ಯರೆ,

ವಿಷಯ :: ಬಾಲಕಾರ್ಮಿಕ ತರಬೇತಿ ಕೇಂದ್ರಗಳಲ್ಲಿ ಓದುತ್ತಿರುವ ಮಕ್ಕಳಿಗೆ ಪ್ರಮಾಣ ಪತ್ರಗಳನ್ನು ವಿತರಿಸುವ ಬಗ್ಗೆ.

ಉಲ್ಲೇಖ :: ಸರಕಾರದ ಅಧೀನ ಕಾರ್ಯದರ್ಶಿಗಳು ಕಂದಾಯ ಇಲಾಖೆ ಬೆಂಗಳೂರ ಇವರ ಪತ್ರ ಸಂಖ್ಯೆ/ಕಂಇ/6166 ಸಮನ್ವಯ 2018 ದಿನಾಂಕ 4.4.2018

Child-labour

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದನ್ವಯ, ಕರ್ನಾಟಕ ರಾಜ್ಯ ಬಾಲಕಾರ್ಮಿಕ ಯೋಜನಾ ಸೂಸೈಟಿಯ 18 ನೇ ಸಭೆಯ ತಿರ್ಮಾನದಂತೆ, ಬಾಲಕಾರ್ಮಿಕ ತರಬೇತಿ ಕೇಂದ್ರಗಳಲ್ಲಿ ಒದುತ್ತಿರುವ ಮಕ್ಕಳಿಗೆ ಕನ್ನಡ ಮಾಧ್ಯಮ ಆಧಾರ ಕಾರ್ಡ 371(ಜೆ) ಹಾಗೂ ಇತರೆ ಪ್ರಮಾಣ ಪತ್ರಗಳನ್ನು ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ತಹಸೀಲ್ದಾರುಗಳು ಮುಖಾಂತರ ನೀಡಬೇಕಾಗಿರುತ್ತದೆ.

ಆದುದರಿಂದ ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ನಿರ್ದೇಶನ ನೀಡುವಂತೆ, ನಿರ್ದೇಶಿಸಿರುತ್ತಾರೆ.

ಪ್ರಯುಕ್ತ ಉಲ್ಲೇಖಿತ ಪತ್ರದ ಪ್ರತಿಯನ್ನು ಈ ಪತ್ರಕ್ಕೆ ಅಡಕಗೊಳಿಸುತ್ತಾ, ನಿಯಮಾನುಸಾರ ಪರಿಶೀಲಿಸಿ, ಅಗತ್ಯಕ್ರಮ ಕೈಗೊಳ್ಳಲು ತಮ್ಮ ಅಧೀನದಲ್ಲಿ ಬರುವ ಎಲ್ಲಾ ತಹಸೀಲ್ದಾರರಿಗೆ ಸೂಕ್ತ ನಿರ್ದೇಶನ ನಿಡುವಂತೆ ಕೋರಲಾಗಿದೆ.

ತಮ್ಮ ವಿಶ್ವಾಸಿ,
18/5
ಅಪರ ಪ್ರಾದೇಶಿಕ ಆಯುಕ್ತರು
ಕಲಬುರಗಿ ವಿಭಾಗ, ಕಲಬುರಗಿ.

37 9/6/18

22/05/2018

**ಪ್ರತಿಯನ್ನು:-** ಸರಕಾರದ ಪ್ರಧಾನ ಕಾರ್ಯದರ್ಶಿಗಳು ಕಂದಾಯ ಇಲಾಖೆ ಬಹುಮಹಡಿಗಳ ಕಟ್ಟಡ ಬೆಂಗಳೂರು ರವರ ದಯಾಪರ ಮಾಹಿತಿಗಾಗಿ ಸಲ್ಲಿಸಲಾಗಿದೆ.

02/6/18

E:\RC.office.AH\MSC\MSC-Gen Ltrs..doc

E-67362

# ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 6166 ಸಮನ್ವಯ 2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ : 04.04.2018.

ಕಾರ್ಯಾಲಯ
26 APR 2018

**ಇವರಿಂದ :**
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ,
ಬೆಂಗಳೂರು-560 001.

**ಇವರಿಗೆ :**
ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಕಲಬುರಗಿ & ಬೆಳಗಾವಿ ವಿಭಾಗ.
ಎಲ್ಲಾ ಜಿಲ್ಲಾಧಿಕಾರಿಗಳು.

Child-Labour

ಮಾನ್ಯರೇ,

ವಿಷಯ:- ಬಾಲಕಾರ್ಮಿಕ ತರಬೇತಿ ಕೇಂದ್ರಗಳಲ್ಲಿ ಓದುತ್ತಿರುವ ಮಕ್ಕಳಿಗೆ ಪ್ರಮಾಣ ಪತ್ರಗಳನ್ನು ವಿತರಿಸುವ ಬಗ್ಗೆ.

ಉಲ್ಲೇಖ:- ಸರ್ಕಾರದ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ಬೆಂಗಳೂರು ಇವರ ಅ.ಸ.ಪತ್ರಸಂಖ್ಯೆ: ಕಾಇ/04/ಸಿಎಲ್‌ಸಿ/2018 ದಿನಾಂಕ:01.02.2018..

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರವನ್ನು ಇದರೊಂದಿಗೆ ಲಗತ್ತಿಸಲಾಗಿದೆ, ಸದರಿ ಪತ್ರದಲ್ಲಿ ಕರ್ನಾಟಕ ರಾಜ್ಯ ಬಾಲಕಾರ್ಮಿಕ ಯೋಜನಾ ಸೊಸೈಟಿಯ 18ನೇ ಸಭೆಯ ತೀರ್ಮಾನದಂತೆ, ಬಾಲಕಾರ್ಮಿಕ ತರಬೇತಿ ಕೇಂದ್ರಗಳಲ್ಲಿ ಓದುತ್ತಿರುವ ಮಕ್ಕಳಿಗೆ ಕನ್ನಡ ಮಾಧ್ಯಮ, ಆಧಾರ್ ಕಾರ್ಡ್ , 371(ಜೆ) ಹಾಗೂ ಇತರೆ ಪ್ರಮಾಣ ಪತ್ರಗಳನ್ನು ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ತಹಸೀಲ್ದಾರ್‌ಗಳ ಮುಖಾಂತರ ನೀಡಬೇಕಾಗಿರುತ್ತದೆ. ಆದ್ದರಿಂದ,ಇದನ್ನು ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಿಸಿದವರಿಗೆ ನಿರ್ದೇಶನ ನೀಡುವಂತೆ, ಕೋರಲು ಈ ಮೂಲಕ ನಿರ್ದೇಶಿತನಾಗಿದ್ದೇನೆ.

26/04/2018

ತಮ್ಮ ನಂಬುಗೆಯ,

4/4/18

[ಎಂ.ಇ. ಚನ್ನಬಸವರಾಜ]
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ [ಸಮನ್ವಯ]

04/04/18

**ಪ್ರತಿಯನ್ನು ಮಾಹಿತಿಗಾಗಿ:**
ಸರ್ಕಾರದ ಕಾರ್ಯದರ್ಶಿ, ಕಾರ್ಮಿಕ ಇಲಾಖೆ,4ನೇ ಮಹಡಿ ವಿಕಾಸ ಸೌಧ, ಬೆಂಗಳೂರು-01.

26
24/5/18

24/5/18

ಅಮ್ಲನ್ ಆದಿತ್ಯ ಬಿಸ್ವಾಸ್, ಭಾ.ಆ.ಸೇ.,
ಸರ್ಕಾರದ ಕಾರ್ಯದರ್ಶಿ
AMLAN ADITYA BISWAS, I.A.S.,
Secretary to Government

ಕಾರ್ಮಿಕ ಇಲಾಖೆ
Labour Department
Government of Karnataka

ಅ.ಸ. ಪತ್ರ ಸಂಖ್ಯೆ: ಕಾಇ 04 ಸಿಎಲ್‌ಸಿ 2018

ಬೆಂಗಳೂರು, ದಿನಾಂಕ: 01.02.2018

6166 3/2/18

ಸನ್ಮಾನ್ಯರೇ,

ಕರ್ನಾಟಕ ರಾಜ್ಯ ಬಾಲಕಾರ್ಮಿಕ ಯೋಜನಾ ಸೊಸೈಟಿಯ 18ನೇ ಸರ್ವಸದಸ್ಯರ ಸಭೆಯಲ್ಲಿ ಚರ್ಚಿಸಿ ತೀರ್ಮಾನ ತೆಗೆದುಕೊಂಡಿರುವಂತೆ, ಬಾಲಕಾರ್ಮಿಕ ತರಬೇತಿ ಕೇಂದ್ರಗಳಲ್ಲಿ ಓದುತ್ತಿರುವ ಮಕ್ಕಳಿಗೆ ಕನ್ನಡ ಮಾಧ್ಯಮ, ಆಧಾರ್‌ಕಾರ್ಡ್ ಹಾಗೂ ಇತರೇ ಪ್ರಮಾಣ ಪತ್ರಗಳಾದ 371[ಜೆ] ಇತ್ಯಾದಿ ಪ್ರಮಾಣ ಪತ್ರವನ್ನು ನೀಡಲು ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ತಹಶೀಲ್ದಾರ್‌ಗಳ ಮುಖಾಂತರ ನೀಡಬೇಕಾಗುತ್ತದೆ.

ಆದ್ದರಿಂದ, ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ತಹಶೀಲ್ದಾರ್‌ರವರಿಗೆ ಈ ಬಗ್ಗೆ ನಿರ್ದೇಶನ ನೀಡಲು ಕಂದಾಯ ಇಲಾಖಾ ವ್ಯಾಪ್ತಿಯಿಂದ ಜಿಲ್ಲಾಧಿಕಾರಿಗಳಿಗೆ ಆದೇಶ ನೀಡುವಂತೆ ತಮ್ಮನ್ನು ಕೋರಬಯಸುತ್ತೇನೆ.

ಗೌರವಗಳೊಂದಿಗೆ,

ತಮ್ಮ ವಿಶ್ವಾಸಿ,

**ಡಾ: ಇ.ವಿ.ರಮಣರೆಡ್ಡಿ, ಭಾ.ಅ.ಸೇ**
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಕಂದಾಯ ಇಲಾಖೆ
ಬಹುಮಹಡಿಗಳ ಕಟ್ಟಡ, ಬೆಂಗಳೂರು–01

5/2/18

24/5/18

ಕೊಠಡಿ ಸಂ. 414, 4ನೇ ಮಹಡಿ, ವಿಕಾಸ ಸೌಧ, ಡಾ: ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು – 560 001
Room No. 414, 4th Floor, Vikasa Soudha, Dr. B.R. Ambedkar Veedhi, Bengaluru - 560 001
Tel: +91-80-22254894, 22035004, Fax: +91-80-22256368, e-mail: secy-labour@karnataka.gov.in

ಕರ್ನಾಟಕ ಸರ್ಕಾರ

Tel No.:08532-227581
Email: nclpraichur@gmail.com

# ಜಿಲ್ಲಾ ಬಾಲಕಾರ್ಮಿಕ ಯೋಜನೆ, ಜಿಲ್ಲಾಧಿಕಾರಿಗಳ ಕಾರ್ಯಾಲಯ
## ರಾಯಚೂರು

ನಂ. ಎನ್‌ಸಿಎಲ್‌ಪಿ/37/2014-15 ದಿನಾಂಕ:20 -06-2018

ಇವರಿಗೆ,
ಉಪ ನಿರ್ದೇಶಕರು
ಸಾರ್ವಜನಿಕ ಶಿಕ್ಷಣ ಇಲಾಖೆ
ರಾಯಚೂರು.

ಮಾನ್ಯರೇ,

ವಿಷಯ:- ಬಾಲಕಾರ್ಮಿಕ ತರಬೇತಿ ಕೇಂದ್ರ/ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಿದ/ ಮಾಡುತ್ತಿರುವ ಮಕ್ಕಳಿಗೆ ಪ್ರಮಾಣ ಪತ್ರಗಳನ್ನು ವಿತರಿಸುವ ಬಗ್ಗೆ.

ಉಲ್ಲೇಖ:- 1) ಮಾನ್ಯ ಸರಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ:ಕಾಇ04/ಸಿಎಲ್‌ಸಿ/2018 ದಿ: 01-02-2018
2) ಮಾನ್ಯ ಸರಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರುರವರ ಪತ್ರ ಸಂ:ಕಂಇ6166/ಸಮನ್ವಯ/2018 ದಿ: 4-4-2018.
3) ಮಾನ್ಯ ಅಪರ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ ಕಲಬುರಗಿರವರ ಪತ್ರ ಸಂ:ಪ್ರಾಆಕ/ಸಂಕೀರ್ಣ/16/2018-19 ದಿನಾಂಕ: 10-5-2018

****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಪತ್ರದ ಮುಖಾಂತರ ಮಾನ್ಯ ಸರ್ಕಾರದ ಕಾರ್ಯದರ್ಶಿಗಳು ಕಾರ್ಮಿಕ ಇಲಾಖೆ ಬೆಂಗಳೂರು ರವರು ಬಾಲಕಾರ್ಮಿಕ ತರಬೇತಿ ಕೇಂದ್ರಗಳಲ್ಲಿ ಓದುತ್ತಿರುವ ಮಕ್ಕಳಿಗೆ ಕನ್ನಡ ಮಾಧ್ಯಮ, ಆಧಾರ್ ಕಾರ್ಡ್ ಹಾಗೂ ಇತರೇ ಪ್ರಮಾಣ ಪತ್ರಗಳಾದ 371 (ಜೆ) ಇತ್ಯಾದಿ ಪ್ರಮಾಣ ಪತ್ರಗಳನ್ನು ಜಿಲ್ಲಾಧಿಕಾರಿಗಳ ಮುಖಾಂತರ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಕಂದಾಯ ಇಲಾಖೆ ಇವರಿಗೆ ಮನವಿ ಮಾಡಿರುತ್ತಾರೆ.

ಉಲ್ಲೇಖ (2) ರ ಪತ್ರದನ್ವಯ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಕಂದಾಯ ಇಲಾಖೆ ಬೆಂಗಳೂರುರವರು ಪ್ರಾದೇಶಿಕ ಆಯುಕ್ತರು ಕಲಬುರಗಿ ಮತ್ತು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಬಾಲಕಾರ್ಮಿಕ ತರಬೇತಿ ಕೇಂದ್ರಗಳಲ್ಲಿ ಓದುತ್ತಿರುವ ಮಕ್ಕಳಿಗೆ ಕನ್ನಡ ಮಾಧ್ಯಮ, ಆಧಾರ್ ಕಾರ್ಡ್ ಹಾಗೂ ಇತರೇ ಪ್ರಮಾಣ ಪತ್ರಗಳಾದ 371 (ಜೆ) ಇತ್ಯಾದಿ ಪ್ರಮಾಣ ಪತ್ರಗಳನ್ನು ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ಅಗತ್ಯ ದಾಖಲೆಗಳನ್ನು ನೀಡಬೇಕಾಗಿದ್ದು ಇದನ್ನು ನಿಯಮಾನುಸಾರ ಪರಿಶೀಲಿಸಿ, ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಿಸಿದವರಿಗೆ ನಿರ್ದೇಶನ ನೀಡಲು ನಿರ್ದೇಶಿಸಿರುತ್ತಾರೆ.

ಉಲ್ಲೇಖ (3) ರ ಪತ್ರದನ್ವಯ ಮಾನ್ಯ ಅಪರ ಪ್ರಾದೇಶಿಕ ಆಯುಕ್ತರು ಕಲುಬುರಗಿ ವಿಭಾಗ, ಕಲುಬುರಗಿ ರವರು ಬಾಲಕಾರ್ಮಿಕ ತರಬೇತಿ ಕೇಂದ್ರಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಮಕ್ಕಳಿಗೆ ಕನ್ನಡ ಮಾಧ್ಯಮ, ಆಧಾರ

ಉಲ್ಲೇಖ (3) ರ ಪತ್ರದನ್ವಯ ಮಾನ್ಯ ಅಪರ ಪ್ರಾದೇಶಿಕ ಆಯುಕ್ತರು ಕಲುಬುರಗಿ ವಿಭಾಗ, ಕಲುಬುರಗಿ ರವರು ಬಾಲಕಾರ್ಮಿಕ ತರಬೇತಿ ಕೇಂದ್ರಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಮಕ್ಕಳಿಗೆ ಕನ್ನಡ ಮಾಧ್ಯಮ, ಆಧಾರ ಕಾರ್ಡ್ ಹಾಗೂ ಹೈದ್ರಾಬಾದ ಕರ್ನಾಟಕ ಪ್ರಮಾಣ ಪತ್ರ (371 ಜೆ) ಮತ್ತು ಇತರೆ ಪ್ರಮಾಣ ಪತ್ರಗಳನ್ನು ನಿಯಮಾನುಸಾರ ಪರಿಶೀಲಿಸಿ, ಅಗತ್ಯ ಕ್ರಮಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಕೋರಿರುತ್ತಾರೆ.

ಮೇಲಿನ ನಿರ್ದೇಶನಗಳ ಹಿನ್ನೆಲೆಯಲ್ಲಿ ರಾಯಚೂರು ಜಿಲ್ಲೆಯಲ್ಲಿ ರಾಷ್ಟ್ರೀಯ ಬಾಲಕಾರ್ಮಿಕ ಯೋಜನೆ ಅನುಷ್ಠಾನದಲ್ಲಿದ್ದು, ಸದರಿ ಯೋಜನೆ ಅಡಿಯಲ್ಲಿ ಬಾಲಕಾರ್ಮಿಕ ತರಬೇತಿ ಕೇಂದ್ರಗಳನ್ನು ನಡೆಸಲಾಗುತ್ತಿದೆ. ಸದರಿ ತರಬೇತಿ ಕೇಂದ್ರಗಳಲ್ಲಿ ಪ್ರತಿ ವರ್ಷ ಸುಮಾರು 500 ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿದ್ದು, ಸದರಿ ಮಕ್ಕಳನ್ನು ಮುಖ್ಯವಾಹಿನಿಗೆ ತರಲು ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕಾಗಿದೆ.

ಈ ಹಿಂದೆ ವಿದ್ಯಾಭ್ಯಾಸವನ್ನು ಬಿಟ್ಟು ಸಮಾಜದ ಮುಖ್ಯವಾಹಿನಿಯಿಂದ ಬೇರೆಯಾಗಿದ್ದು, ಮಕ್ಕಳನ್ನು ಬಾಲಕಾರ್ಮಿಕ ಯೋಜನೆಯಡಿ ಶಾಲೆಗಳಿಗೆ /ತರಬೇತಿ ಕೇಂದ್ರಗಳಿಗೆ ಕರೆತಂದು ಸೂಕ್ತ ವಿದ್ಯಾಭ್ಯಾಸ ನೀಡಿ, ಅವರ ಭವಿಷ್ಯದ ಉದ್ಯೋಗ, ಜೀವನಕ್ಕೆ ಹಾಗೂ ಉನ್ನತ ವಿದ್ಯಾಭ್ಯಾಸ ಕಲ್ಪಿಸಲು ಹೈದ್ರಾಬಾದ್ ಕರ್ನಾಟಕ (371 ಜೆ) ಪ್ರಮಾಣ ಪತ್ರವನ್ನು ಪಡೆಯಲು ಅನುವು ಮಾಡಿಕೊಡುವುದು ಅಗತ್ಯವೆಂದು ಸರ್ಕಾರಿ ಮಟ್ಟದಲ್ಲಿ ಮೇಲೆ ತಿಳಿಸಿದಂತೆ ನಿರ್ದೇಶನ ನೀಡಿರುವುದರಿಂದ ಬಾಲಕಾರ್ಮಿಕ ತರಬೇತಿ ಕೇಂದ್ರಗಳಲ್ಲಿ ವಿದ್ಯಾಭ್ಯಾಸ ಮುಗಿಸಿ ಮುಖ್ಯವಾಹಿನಿಗೆ ಹೋಗುವ/ ಹೋಗಿರುವ ವಿದ್ಯಾರ್ಥಿಗಳಿಗೆ ಅಗತ್ಯ ಪ್ರಮಾಣ ಪತ್ರಗಳನ್ನು ನೀಡಲು ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನಿರ್ದೇಶಿಸಲಾಗಿದೆ.

ಈ ನಿರ್ದೇಶನಗಳನ್ನು ಕನ್ನಡ ಮಾಧ್ಯಮ, ಗ್ರಾಮೀಣ ಮಾಧ್ಯಮ ಮತ್ತು ಇತರೆ ವ್ಯಾಸಂಗ ಪ್ರಮಾಣ ಪತ್ರಗಳನ್ನು ಪಡೆಯಲು ಅರ್ಜಿಯನ್ನು ವಿಚಾರಣೆ ಮಾಡಿ ಶಿಫಾರಸ್ಸು ಮಾಡುವ ತಾಲೂಕಿನ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮತ್ತು ಸಂಬಂಧಿಸಿದ ಶಾಲಾ ಮುಖ್ಯಗುರುಗಳ ಗಮನಕ್ಕೆ ತರಲು ಹಾಗೂ ಬಾಲಕಾರ್ಮಿಕ ಶಾಲೆ/ತರಬೇತಿ ಕೇಂದ್ರದಿಂದ ಮುಖ್ಯವಾಹಿನಿಗೆ ಹೋಗುವ/ಹೋಗಿರುವ ಮಕ್ಕಳು ವ್ಯಾಸಂಗ ಪ್ರಮಾಣ ಪತ್ರವನ್ನು ಪಡೆಯಲು ಅನುವು ಮಾಡಿಕೊಡುವಂತೆ ಸ್ಪಷ್ಟ ನಿರ್ದೇಶನ ನೀಡಲು ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ,

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು
ಜಿಲ್ಲಾ ಬಾಲಕಾರ್ಮಿಕ ಯೋಜನೆ
ರಾಯಚೂರು.

ಪ್ರತಿಯನ್ನು :

1) ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, ಕೊಠಡಿ ಸಂಖ್ಯೆ: 414, 4ನೇ ಮಹಡಿ, ವಿಕಾಸ ಸೌಧ, ಡಾ॥ ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ಸಮನ್ವಯ), ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
3) ಮಾನ್ಯ ಅಪರ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ ಕಲಬುರಗಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
4) ಮಾನ್ಯ ಕಾರ್ಮಿಕ ಆಯುಕ್ತರು, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
5) ಸಹಾಯಕ ಆಯುಕ್ತರು, ರಾಯಚೂರು ಹಾಗೂ ಲಿಂಗಸೂಗೂರು ಉಪ ವಿಭಾಗರವರ ಮಾಹಿತಿಗಾಗಿ.